ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

ಸಂಖ್ಯೆ: ಕವಿಪ್ರನಿನಿ/ಬಿ16/86469/2018-19 ದಿನಾಂಕ: 18 FEB 2019

## ಸುತ್ತೋಲೆ

**ವಿಷಯ:** ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇಕಡ 10 ರ ಕೋಟಾದಡಿಯಲ್ಲಿ ನೇರ ನೇಮಕಾತಿಗಾಗಿ ನಿಗಧಿಪಡಿಸಿದ ಕನಿಷ್ಟ ಸೇವೆಯನ್ನು ಪರಿಗಣಿಸುವ ಬಗ್ಗೆ.

**ಉಲ್ಲೇಖ:** 1. ನಿಗಮದ ಪತ್ರ ಸಂಖ್ಯೆ: ಕವಿಪ್ರನಿನಿ/ಬಿ16/4739/1980-81, ದಿನಾಂಕ: 02.04.2016.

2. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ನೌಕರರ ಸಂಘ(ನೋಂ.ಸಂ.659), ಬೆಂಗಳೂರು ರವರ ದಿನಾಂಕ: 17.01.2017 ರ ಪತ್ರ ಸಂಖ್ಯೆ: ಕವಿಪ್ರನಿನೌಸಂ/892/2016-17.

***

ನಿಗಮದ ದಿನಾಂಕ: **02.04.2016** ರ ಪತ್ರದಲ್ಲಿ ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇಕಡ 10 ರ ಕೋಟಾದಡಿಯಲ್ಲಿ ನೇರ ನೇಮಕಾತಿಗೆ ಅರ್ಜಿ ಸಲ್ಲಿಸಲು, ನೌಕರರು ಸೇವೆಗೆ ಸೇರಿದ ದಿನಾಂಕದಿಂದ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ನಾಲ್ಕು ವರ್ಷಗಳ ಕನಿಷ್ಟ ಸೇವೆಯನ್ನು ನಿರ್ಧರಿಸುವಂತೆ ಸ್ಪಷ್ಟೀಕರಣ ನೀಡಲಾಗಿರುತ್ತದೆ.

ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋಂ.ಸಂ.659), ಬೆಂಗಳೂರು ಇವರು ದಿನಾಂಕ: **17.01.2017** ರ ತಮ್ಮ ಪತ್ರದಲ್ಲಿ, ನಿಗಮದ ದಿನಾಂಕ: **02.04.2016** ರ ಪತ್ರದಲ್ಲಿ ಸ್ಪಷ್ಟೀಕರಣ ನೀಡಿದ ತರುವಾಯ ನೌಕರರು ಒಂದು ವೃತ್ತದಿಂದ ತಮಗೆ ಅನುಕೂಲವಾಗುವ ಮತ್ತೊಂದು ವೃತ್ತಕ್ಕೆ ವರ್ಗಾವಣೆ ಪಡೆದು ಶೇ.10 ರ ನೇರ ನೇಮಕಾತಿ ಕೋಟಾದಡಿಯಲ್ಲಿ ಉನ್ನತ ಹುದ್ದೆಗಳಿಗೆ ನೇಮಕಾತಿ ಹೊಂದಿದ ನಂತರ ಈ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ವೃತ್ತಗಳಿಗೆ ವರ್ಗಾವಣೆ ಪಡೆಯುತ್ತಿರುವುದಾಗಿ ಹಾಗೂ ಇದರಿಂದ ನಿಗಮ/ಎಸ್ಕಾಂಗಳ ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆ ಉಂಟಾಗುತ್ತಿದ್ದು, ಅದೇ ವೃತ್ತಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ನೌಕರರು ನೇಮಕಾತಿಯಿಂದ ವಂಚಿತರಾಗುತ್ತಿದ್ದಾರೆ ಎಂದು ತಿಳಿಸಿರುತ್ತಾರೆ. ಆದ್ದರಿಂದ, ಹಿಂದೆ ಇದ್ದಂತೆ ಕನಿಷ್ಟ ನಾಲ್ಕು ವರ್ಷಗಳ ಸೇವೆಯನ್ನು ಸಂಬಂಧಪಟ್ಟ ವೃತ್ತಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ನಿರ್ಧರಿಸಲು ಆದೇಶಿಸುವಂತೆ ಕೋರಿರುತ್ತಾರೆ.

ಇವರ ಕೋರಿಕೆಯನ್ನು ಕೂಲಂಕುಷವಾಗಿ ಪರಿಶೀಲಿಸಲಾಯಿತು. ನಿಗಮದ ನೌಕರರು ಶೇಕಡ 10 ರ ಕೋಟಾದಲ್ಲಿ ಕೇವಲ ನೇಮಕಾತಿಗಾಗಿ ಒಂದು ವೃತ್ತದಿಂದ ಮತ್ತೊಂದು ವೃತ್ತಕ್ಕೆ ಸ್ವಂತ ಕೋರಿಕೆಯ ಮೇರೆಗೆ ವರ್ಗಾವಣೆಗೊಂಡು, ನೇಮಕಾತಿಯಾದ ನಂತರ ಕೆಲವೇ ದಿನಗಳಲ್ಲಿ ಹಿಂದಿನ ವೃತ್ತ ಅಥವಾ ಮತ್ತೊಂದು ವೃತ್ತಕ್ಕೆ ವರ್ಗಾವಣೆ ಹೊಂದುತ್ತಿರುವ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿರುವುದನ್ನು ಗಮನಿಸಲಾಗಿದೆ. ಇದರಿಂದ ನೇಮಕಗೊಂಡ ವೃತ್ತಗಳಲ್ಲಿನ ಶೇಕಡ 10 ರ ಕೋಟಾದಲ್ಲಿ ನೇರ ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಇತರೆ ಅರ್ಹ ನೌಕರರಿಗೆ ಅನ್ಯಾಯವಾಗುತ್ತಿದ್ದು, ನೇಮಕಾತಿ ಹೊಂದಿದ ನಂತರ ನೌಕರರು ಸ್ವಂತ ಕೋರಿಕೆಯ ಮೇರೆಗೆ ಇತರೆ ವೃತ್ತಗಳಿಗೆ ವರ್ಗಾವಣೆಗೊಂಡಲ್ಲಿ, ಹುದ್ದೆಗಳು ಖಾಲಿ ಉಳಿದು ನಿಗಮದ ಕೆಲಸ ಕಾರ್ಯಗಳಿಗೆ ಅಡಚಣೆ ಉಂಟಾಗುತ್ತಿರುವುದು ಕಂಡುಬಂದಿರುತ್ತದೆ.

ಆದುದರಿಂದ, ನಿಗಮದ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ರಲ್ಲಿನ ಕಿರಿಯ ಇಂಜಿನಿಯರ್(ವಿದ್ಯುತ್/ಸಿವಿಲ್) ಹಾಗೂ ಅಧ್ಯಾಯ-7 ರಲ್ಲಿನ ಸಹಾಯಕ, ಕಿರಿಯ ಸಹಾಯಕ ಹಾಗೂ ಬೆರಳಚ್ಚುಗಾರ ಹುದ್ದೆಗಳ ನೇರ ನೇಮಕಾತಿಗಾಗಿ, ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇಕಡ 10 ರ ಕೋಟಾದಡಿಯಲ್ಲಿ ಅರ್ಜಿ ಸಲ್ಲಿಸಲು ನೌಕರರು ಕಾರ್ಯನಿರ್ವಹಿಸುತ್ತಿರುವ ವೃತ್ತಗಳಲ್ಲಿ ಸತತವಾಗಿ ಕನಿಷ್ಟ 4 ವರ್ಷಗಳ ಸೇವೆಯನ್ನು ಸಲ್ಲಿಸಿರುವುದನ್ನು ಪರಿಗಣಿಸುವಂತೆ ಈ ಮೂಲಕ ತಿಳಿಸಲಾಗಿದೆ.

"ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿದೆ"

Ump...
ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ/ನಿರ್ದೇಶಕರು(ಹಣಕಾಸು), ಬೆವಿಕಂ.
3. ಎಲ್ಲಾ ಪ್ರಧಾನ ವ್ಯವಸ್ಥಾಪಕರು, ಎಸ್ಕಾಂ.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂ.
5. ಎಲ್ಲಾ ಮುಖ್ಯ ಇಂಜಿನಿಯರ್, ಕವಿಪ್ರನಿನಿ/ಎಸ್ಕಾಂ.
6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ)/ ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

<u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com-->eprasarna ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>

7. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
9. ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ), ಕವಿಪ್ರನಿನಿ/ಎಸ್ಕಾಂ.
10. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಗಳನ್ನು ಮಾಹಿತಿಗಾಗಿ:</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ(659) ಹಾಗೂ ನಿರ್ದೇಶಕರು, ಕವಿಪ್ರನಿನಿ/ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂಗಳ ಪಂಗಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಧಿಕಾರಿಗಳ ಸಂಘ, ಬೆಂಗಳೂರು.